<u>**ಕರ್ನಾಟಕ ವಿಧಾನ ಪರಿಷತ್ತು**</u>

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 2230

ಸದಸ್ಯರ ಹೆಸರು : ಡಾ|| ತಳವಾರ್ ಸಾಬಣ್ಣ

ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು

ಉತ್ತರಿಸುವ ದಿನಾಂಕ : 18.03.2022

ಕ್ರ. ಸಂ	ಪ್ರಶ್ನೆ	ಉತ್ತರ
ಅ.	ಬೆಳಗಾವಿ ಕೇಂದ್ರ ಬಸ್ ನಿಲ್ದಾಣ ಕಾಮಗಾರಿ ಪ್ರಾರಂಭವಾಗಿ 5 ವರ್ಷವಾದರೂ ಇನ್ನೂ ಮುಗಿಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಗಮನಕ್ಕೆ ಬಂದಿದೆ.
ಆ.	ಮೂಲ ಗುತ್ತಿಗೆದಾರರ ಮತ್ತು ಲೀಸ್ ಗುತ್ತಿಗೆದಾರರ ಮಧ್ಯೆ ಇರುವ ಭಿನ್ನಾಭಿಪ್ರಾಯದ ಕಾರಣ ಕಾಮಗಾರಿ ಅಪೂರ್ಣಗೊಂಡಿರುವುದು ನಿಜವೇ;	- ಇಲ್ಲ -
ಇ.	ಉತ್ತರ ಕರ್ನಾಟಕದ ಮುಖ್ಯ ನಗರ ಬೆಳಗಾವಿ ಬಸ್ ನಿಲ್ದಾಣಕ್ಕೆ ಪ್ರತಿ ದಿನ ಸಾವಿರಾರು ಬಸ್ಸುಗಳು ಬರುತ್ತಿದ್ದು, ಹಳೆಯ ಬಸ್ ನಿಲ್ದಾಣದಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯ ಕಾರಣದಿಂದ ಪ್ರಯಾಣಿಕರು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು. ಬೆಳಗಾವಿ ಬಸ್ ನಿಲ್ದಾಣದ ಕಾಮಗಾರಿಯನ್ನು ಹಾಲಿ ಬಸ್ ನಿಲ್ದಾಣದ ಜಾಗದಲ್ಲಿಯೇ ನಿರ್ಮಿಸಲಾಗುತ್ತಿದ್ದರಿಂದ, ಹಂತಹಂತವಾಗಿ ಬಸ್ ನಿಲ್ದಾಣದ ಕಾರ್ಯಾಚರಣೆಗೆ ಹಾಗೂ ಸಾರ್ವಜನಿಕ ಪ್ರಯಾಣಿಕರಿಗೆ ಯಾವುದೇ ತೊಂದರೆಯಾಗದ ರೀತಿಯಲ್ಲಿ ಸುರಕ್ಷತಾ ಕ್ರಮಗಳನ್ನು ಅಳವಡಿಸಿಕೊಂಡು ನಿರ್ಮಿಸಬೇಕಾಗಿದ್ದರಿಂದ ವಿಳಂಬಕ್ಕೆ ಪ್ರಮುಖ ಕಾರಣವಾಗಿರುತ್ತದೆ. ಅಲ್ಲದೇ, ನಗರ ಸಾರಿಗೆ ಬಸ್ ನಿಲ್ದಾಣವನ್ನು ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿ ಹೊಸದಾಗಿ ನಿರ್ಮಿಸಲಾಗುತ್ತಿದ್ದರಿಂದ ಸದರಿ ಬಸ್ ನಿಲ್ದಾಣದಿಂದ ಕಾರ್ಯಾಚರಣೆ ನಡೆಸುತ್ತಿದ್ದ ಬಸ್‌ಗಳನ್ನೂ ಸಹ ಕೇಂದ್ರ ಬಸ್ ನಿಲ್ದಾಣದ ಜಾಗದಲ್ಲಿಯೇ ಅವಕಾಶ

		ಮಾಡಿಕೊಟ್ಟಿರುವುದರಿಂದ ಗುತ್ತಿಗೆದಾರರಿಗೆ ಕಾಮಗಾರಿಯನ್ನು ನಿರ್ವಹಿಸಲು ತೊಂದರೆಯಾಗಿರುತ್ತದೆ. ಮುಂದುವರೆದು, ಗುತ್ತಿಗೆದಾರರಿಂದ ಅದ ವಿಳಂಬಕ್ಕೆ ಈಗಾಗಲೇ ಹಲವಾರು ನೋಟೀಸ್ ನೀಡಿ ನಿಯಮಾನುಸಾರ ರೂ.8.00 ಲಕ್ಷಗಳವರೆಗೆ ದಂಡವನ್ನೂ ಸಹ ವಿಧಿಸಲಾಗಿದೆ. ಪ್ರಸ್ತುತ ಕಾಮಗಾರಿಯು ಪ್ರತಿ ಶತ 80ರಷ್ಟು ಪೂರ್ಣಗೊಂಡಿರುತ್ತದೆ.
ಈ.	2019ರಲ್ಲಿ ಪೂರ್ಣಗೊಳ್ಳಬೇಕಾಗಿದ್ದ ಬೆಳಗಾವಿ ಕೇಂದ್ರ ಬಸ್ ನಿಲ್ದಾಣವನ್ನು ಶೀಘ್ರದಲ್ಲಿ ಪೂರ್ಣಗೊಳಿಸಿ ಪ್ರಯಾಣಿಕರಿಗೆ ಅನುಕೂಲ ಮಾಡಿಕೊಡಲಾಗುವುದೆ?	ಸದರಿ ಬಸ್ ನಿಲ್ದಾಣದ ಕಾಮಗಾರಿಯನ್ನು ಜೂನ್-2022ರ ಅಂತ್ಯದ ವೇಳೆಗೆ ಪೂರ್ಣಗೊಳಿಸಿ ಪ್ರಯಾಣಿಕರ ಉಪಯೋಗಕ್ಕೆ ಬಿಟ್ಟುಕೊಡುವುದರ ಮೂಲಕ ಅನುಕೂಲ ಮಾಡಿಕೊಡಲಾಗುವುದು.

ಸಂಖ್ಯೆ: ಟಿಡಿ 109 ಟಿಸಿಕ್ಯೂ 2022

(ಬಿ.ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು